ಕರ್ನಾಟಕ ಸರ್ಕಾರ

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಆರೋಗ್ಯ ಸೌಧ, ಬೆಂಗಳೂರು–23.**

ಸಂಖ್ಯೆ:ಇಪಕೋ/ವಿ(3)/03/2023–24 ದಿನಾಂಕ:02.08.2023

**ಸುತ್ತೋಲೆ**

ವಿಷಯ: ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳ ಹುದ್ದೆಯಿಂದ ಆರೋಗ್ಯ ಶಿಕ್ಷಣಾಧಿಕಾರಿಗಳ ಹುದ್ದೆಗೆ ಸ್ಥಾನವನ್ನ ಪದೋನ್ನತಿ ನೀಡುವ ಬಗ್ಗೆ.

ಉಲ್ಲೇಖ: ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳ ಅಂತಿಮ ಜೇಷ್ಠತಾ ಪಟ್ಟಿ ನಿರ್ದೇಶನಾಲಯದ ಅಧಿಕೃತ ಜ್ಞಾಪನಾ ಪತ್ರ ಸಂಖ್ಯೆ:ಇಪಕೋ/ವಿ(3)07/2022–23, ದಿನಾಂಕ:18.07.2023.

*****

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳ ಹುದ್ದೆಯಿಂದ ಆರೋಗ್ಯ ಶಿಕ್ಷಣಾಧಿಕಾರಿಗಳ ಹುದ್ದೆಗೆ ಆಡಳಿತ ಹಿತದೃಷ್ಟಿಯಿಂದ ಪದೋನ್ನತಿ ನೀಡುವ ಸಲುವಾಗಿ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅರ್ಹ ನೌಕರರುಗಳಿಗೆ **karunadu.karnataka.gov.in/hfw** ರಲ್ಲಿ ಉಲ್ಲೇಖದ ಅನುಸಾರ ದಿನಾಂಕ:18.07.2023 ರಂದು ಪ್ರಕಟಿಸಲಾಗಿರುವ ಅಂತಿಮ ಜೇಷ್ಠತಾ ಪಟ್ಟಿಯಂತೆ ಈ ಕೆಳಕಂಡ ಜೇಷ್ಠತಾ ಸಂಖ್ಯೆಯ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು ದೃಢೀಕೃತ ದಾಖಲಾತಿಗಳೊಂದಿಗೆ ಕಾರ್ಯ ನಿರ್ವಹಣಾ ವರದಿ ಮತ್ತು ಅಗತ್ಯವಿರುವ ದಾಖಲಾತಿಗಳನ್ನು ಸಲ್ಲಿಸುವುದು.

**ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳ ಹೆಸರು ಜೇಷ್ಠತಾ ಪಟ್ಟಿಯಲ್ಲಿ ಬಿಟ್ಟು ಹೋಗಿದ್ದರೂ ಸಹ ಅಂತಹವರುಗಳು ಪದೋನ್ನತಿಗೆ ಅರ್ಜಿ ಸಲ್ಲಿಸಬಹುದು.**

**ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು**

| | |
|---|---|
| | **ಕಲ್ಯಾಣ ಕರ್ನಾಟಕ ಭಾಗದ ನೌಕರರು** |
| 01 | ಜೇಷ್ಠತಾ ಸಂಖ್ಯೆ 01 ರಿಂದ 09 ರವರೆಗೆ |
| | **ಕಲ್ಯಾಣ ಕರ್ನಾಟಕ ಭಾಗ ಹೊರತುಪಡಿಸಿ** |
| 01 | ಜೇಷ್ಠತಾ ಸಂಖ್ಯೆ 01 ರಿಂದ 05 ರವರೆಗೆ |

1. ಮೂರು ವರ್ಷಗಳ ಕಾರ್ಯ ನಿರ್ವಹಣಾ ವರದಿ ನಿಗದಿತ ನಮೂನೆ (4,5,6 ಮತ್ತು 7 ನಿಯಮ) ಎ) ಭಾಗ–I ವೈಯಕ್ತಿಕ ಮಾಹಿತಿ. ಬಿ) ಭಾಗ–II ಸ್ವಯಂ ಮೌಲ್ಯ ಮಾಪನ. ಸಿ) ಭಾಗ–III ವರದಿ ಮಾಡುವ ಪ್ರಾಧಿಕಾರಿ ಡಿ)ಭಾಗ– IV ಪುನರಾವಲೋಕನ. ಇ)ಭಾಗ–V ಅಂಗೀಕಾರ. ಎಫ್) ಭಾಗ–VI ಸಂವಹನ. 2020–21, 2021–2022, 2022–23 ರವರೆಗೆ ಪ್ರತಿ ವರ್ಷಕ್ಕೆ ಪ್ರತ್ಯೇಕವಾಗಿ ಸಲ್ಲಿಸುವುದು. **(ನಿಗದಿತ ನಮೂನೆಯಲ್ಲಿ ಸಲ್ಲಿಸದ ಕಾರ್ಯ ನಿರ್ವಹಣಾ ವರದಿಗಳನ್ನು ತಿರಸ್ಕರಿಸಲಾಗುವುದು)**
2. ಪದೋನ್ನತಿಗೆ ಅರ್ಜಿ ಸಲ್ಲಿಸುವವರು ಕಡ್ಡಾಯವಾಗಿ ಜೇಷ್ಠತಾ ಸಂಖ್ಯೆಯನ್ನು ನಮೂದಿಸುವುದು.
3. ನೇಮಕಾತಿ ಆದೇಶ.
4. ನೌಕರರ ಖಾಯಂ ಪೂರ್ವ ಸೇವಾವಧಿ ಘೋಷಣೆ ಪತ್ರ.
5. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಹುದ್ದೆಗೆ ಪದೋನ್ನತಿ ಹೊಂದಿದ ಆದೇಶದ ಪ್ರತಿ.
6. ಎಸ್.ಎಸ್.ಎಲ್.ಸಿ. ಅಂಕಪಟ್ಟಿ.
7. ಕನ್ನಡ ಭಾಷಾ ವಿನಾಯಿತಿ ಪ್ರಮಾಣ ಪತ್ರ ನಮೂನೆ 5(5)
8. ಇಲಾಖಾ ಪರೀಕ್ಷೆಗಳಾದ ಅಕೌಂಟ್ಸ್ ಹೈಯರ್ ಮತ್ತು ಜನರಲ್ ಲಾ ಭಾಗ–1.
9. ಸಮಾಜ ವಿಜ್ಞಾನದ ಪದವಿ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಂಕಪಟ್ಟಿ ಹಾಗೂ ಪದವಿ ಪ್ರಮಾಣ ಪತ್ರ.
10. ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪಡೆದಿರುವ ಆರೋಗ್ಯ ಶಿಕ್ಷಣ ಕೋರ್ಸ್‌ನ ಡಿಪ್ಲೋಮ ಪ್ರಮಾಣ ಪತ್ರ.
11. ಅನಧಿಕೃತ ಗೈರು ಹಾಜರಿ/ ಇಲಾಖಾ ವಿಚಾರಣೆ/ ಕ್ರಿಮಿನಲ್ ಮೊಕದ್ದಮೆ/ನ್ಯಾಯಾಲಯದ ಪ್ರಕರಣಗಳು ಬಾಕಿ ಇಲ್ಲದ ಬಗ್ಗೆ ದೃಢೀಕೃತ ಪ್ರತಿ.
12. ಕಲ್ಯಾಣ ಕರ್ನಾಟಕ ಭಾಗದ ಮೀಸಲಾತಿ ಅನ್ವಯ ನಮೂನೆ ಡಿ ಪ್ರತಿಯನ್ನು ಕಡ್ಡಾಯವಾಗಿ ಸಲ್ಲಿಸುವುದು.
13. ಪರಿಶಿಷ್ಟ ಜಾತಿ/ಪ.ಪಂಗಡದ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳಿಂದ ದೃಢೀಕೃತ ಜಾತಿ ಪ್ರಮಾಣ ಪತ್ರ ನೀಡುವುದು.
14. ಆರೋಗ್ಯ ಶಿಕ್ಷಣಾಧಿಕಾರಿಗಳ ಮಂಜೂರು, ಕಾರ್ಯನಿರತ ಖಾಲಿ ಹುದ್ದೆಗಳ ವಿವರ.

2ನೇ ಪುಟಕ್ಕೆ. . .

Scanned by CamScanner

**ಕ್ರ.ಸಂ. 01 ರಿಂದ 14 ರವರೆಗಿನ ಎಲ್ಲಾ ಪ್ರತಿಗಳನ್ನು ಸಂಬಂಧಪಟ್ಟ ಮೇಲಾಧಿಕಾರಿಗಳಿಂದ ಕಡ್ಡಾಯವಾಗಿ ದೃಢೀಕರಿಸಿ ಸಲ್ಲಿಸುವುದು. ದೃಢೀಕರಿಸದ ಪ್ರತಿಗಳನ್ನು ಕಟ್ಟು ನಿಟ್ಟಾಗಿ ಪರಿಗಣಿಸಲಾಗುವುದಿಲ್ಲವೆಂದು ತಿಳಿಸಲಾಗಿದೆ.**

ಅರ್ಹ ಸಿಬ್ಬಂದಿಗಳ ಮೇಲ್ಕಂಡ ಎಲ್ಲಾ ಮಾಹಿತಿ ದಾಖಲೆಗಳನ್ನು ದೃಢೀಕರಿಸಿ, ನಿಗದಿತ ಅವಧಿಯೊಳಗೆ ಕಛೇರಿ ಮುಖ್ಯಸ್ಥರು ಹಾಗೂ ನಿಯಂತ್ರಣಾಧಿಕಾರಿಗಳು ಅಗತ್ಯ ಕ್ರಮವನ್ನು ವಹಿಸತಕ್ಕದ್ದು. ಸಕಾಲದಲ್ಲಿ ಮಾಹಿತಿ ಬಾರದೇ ನೌಕರರು ಪದೋನ್ನತಿಯಿಂದ ವಂಚಿತರಾದಲ್ಲಿ ಸಂಬಂಧಪಟ್ಟ ಕಚೇರಿ ಮುಖ್ಯಸ್ಥರನ್ನೇ ನೇರವಾಗಿ ಜವಾಬ್ದಾರರನ್ನಾಗಿಸಲಾಗುವುದು. ನಿಗದಿತ ಅವಧಿಯೊಳಗೆ ಮಾಹಿತಿ ಸಲ್ಲಿಸದೇ ನಂತರ ಬಂದಂತಹ ಕಾರ್ಯ ನಿರ್ವಹಣಾ ವರದಿಗಳನ್ನು ಪದೋನ್ನತಿಗೆ ಪರಿಗಣಿಸಲಾಗುವುದಿಲ್ಲ ಮತ್ತು ನ್ಯಾಯಾಲಯದಲ್ಲಿ ಈ ಬಗ್ಗೆ ದಾವೆ ಹೂಡಲು ಅನುಮತಿಯನ್ನು ನೀಡಲಾಗುವುದಿಲ್ಲ.

ಒಂದು ವೇಳೆ ನೌಕರರು ಪದೋನ್ನತಿ ನಿರಾಕರಿಸಿದ್ದಲ್ಲಿ ಲಿಖಿತ ರೂಪದಲ್ಲಿ ಪಡೆದು ಸೇವಾಪುಸ್ತಕದಲ್ಲಿ ನಮೂದಿಸಿ ದೃಢೀಕರಿಸುವುದು. ಈ ನೌಕರರುಗಳಲ್ಲಿ ನಿವೃತ್ತಿ/ ಪದೋನ್ನತಿ/ ಮರಣ ಹೊಂದಿದ್ದಲ್ಲಿ ಅಂತಹವರ ಮಾಹಿತಿ ನೀಡುವುದು. ಈ ಮಾಹಿತಿ <u>ಅತಿ ಜರೂರು</u> ಎಂದು ಪರಿಗಣಿಸಿ ದಿನಾಂಕ: 19 . 08 .2023 ರೊಳಗೆ ಮಾಹಿತಿ ಸಲ್ಲಿಸಲು ಸೂಚಿಸಿದೆ.

<u>ವಿಶೇಷ ಸೂಚನೆ:-</u>

1) **ಮೇಲ್ಕಂಡ ಮಾಹಿತಿಗಳನ್ನು ಸಲ್ಲಿಸಿದ ಮಾತ್ರಕ್ಕೆ ಪದೋನ್ನತಿಗೆ ಅರ್ಹರೆಂದು ಭಾವಿಸತಕ್ಕದಲ್ಲ.**

N. Indumathi 2/8/23
ನಿರ್ದೇಶಕರು,
ಆರೋಗ್ಯ ಮತ್ತು ಕು.ಕ. ಸೇವೆಗಳು,
ಬೆಂಗಳೂರು.

<u>ಪ್ರತಿಯನ್ನು:-</u>

1. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ .................................. ಜಿಲ್ಲೆ.
2. ಆಯುಕ್ತರು, ಬಿಬಿಎಂಪಿ/ನಗರಸಭೆ/ಪುರಸಭೆ.......................................
3. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
4. ಡೀನ್ ಮತ್ತು ನಿರ್ದೇಶಕರು, ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು/ಮೈಸೂರು/ ಮಂಡ್ಯ/ಚಾಮರಾಜನಗರ/ಕೊಡಗು/ಹಾಸನ/ಶಿವಮೊಗ್ಗ/ ಬೆಳಗಾವಿ/ಹುಬ್ಬಳ್ಳಿ/ಉತ್ತರ ಕನ್ನಡ/ಗದಗ/ಬೀದರ್/ಕೊಪ್ಪಳ/ ರಾಯಚೂರು/ಕಲಬುರಗಿ/ಬಳ್ಳಾರಿ.
5. ಡೀನ್ ಮತ್ತು ನಿರ್ದೇಶಕರು, ಎಸ್‌ಡಿಎಸ್/ಮಿಂಟೋ ಕಣ್ಣಾಸ್ಪತ್ರೆ/ಬೌರಿಂಗ್ & ಲೇಡಿ ಕರ್ಜನ್ ಆಸ್ಪತ್ರೆ, ಬೆಂಗಳೂರು.
6. ಡೀನ್ ಮತ್ತು ನಿರ್ದೇಶಕರು, ದಂತ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು.
7. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ತರಬೇತಿ ಕೇಂದ್ರ, ..........................................
8. ಅಧೀಕ್ಷಕರು/ಜಿಲ್ಲಾ ಶಸ್ತ್ರಚಿಕಿತ್ಸಕರು, ಜಿಲ್ಲಾ ಆಸ್ಪತ್ರೆ.........................................
9. ಪ್ರಾಂಶುಪಾಲರು, ಎ.ಎನ್.ಎಂ ತರಬೇತಿ ಕೇಂದ್ರ,......................................
10. ತಾಲ್ಲೂಕು ಆರೋಗ್ಯಾಧಿಕಾರಿಗಳು,..................................................
11. ಜಿಲ್ಲಾ ಮಲೇರಿಯಾಧಿಕಾರಿಗಳು/ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿಗಳು/ಜಿಲ್ಲಾ ಕ್ಷಯರೋಗ ನಿವಾರಣಾಧಿಕಾರಿಗಳು/ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು..............................................
12. ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ/ಘಟಕ/ಸಮುದಾಯ ಆರೋಗ್ಯ ಕೇಂದ್ರ.........................
13. ಹಿರಿಯ ಕಾರ್ಯಕ್ರಮಾಧಿಕಾರಿಗಳು, ಗಣಕಯಂತ್ರ ವಿಭಾಗ, ಆಕುಕ ಸೇವೆಗಳು, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
14. ಕಛೇರಿ ಪ್ರತಿ.

Scanned by CamScanner